ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/2/2023(ಭಾಗ)

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 30.09.2023

**ಜ್ಞಾಪನ**

**ವಿಷಯ :** 2023-24ನೇ ಆರ್ಥಿಕ ವರ್ಷದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಂಡಿರುವುದಕ್ಕೆ ಅನುಮೋದನೆ ಮತ್ತು ಭತ್ಯೆ ಮಂಜೂರಾತಿ ನೀಡುವ ಕುರಿತು.

**ಉಲ್ಲೇಖ:**
1. ಸರ್ಕಾರಿ ಆದೇಶ ಸಂಖ್ಯೆ: ಇಡಿ/16/ಟಿಪಿಇ/2017, ದಿನಾಂಕ: 11.12.2019.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 174 ಡಿಟಿಇ 2020, ದಿನಾಂಕ: 22.12.2020
3. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರ ಪ್ರಸ್ತಾವನೆ ಮೇರೆಗೆ
4. ಈ ಕಛೇರಿ ಏಕ ಕಡತ ಸಂಖ್ಯೆ: DTE-ADMIOEST(3)/5/2023(1148845)
5. ಸರ್ಕಾರದ ಪತ್ರ ಸಂಖ್ಯೆ: ಇಡಿ 91 ಡಿಟಿಇ 2023, ದಿನಾಂಕ: 16.09.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಸರ್ಕಾರದ ಆದೇಶ ಮತ್ತು ಉಲ್ಲೇಖ(2) ರ ಪತ್ರದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ ಗರಿಷ್ಠ ಮಾಸಿಕ ಗೌರವ ಧನ ರೂ. 15,000/- ಗಳನ್ನು ಮೀರದಂತೆ ನಿಗದಿಪಡಿಸಿ ಮಂಜೂರಾತಿ ನೀಡಲಾಗಿರುತ್ತದೆ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಹೊರಡಿಸುವ ಶೈಕ್ಷಣಿಕ ಸೆಮಿಸ್ಟರ್‌ನ ವೇಳಾಪಟ್ಟಿಯ ಅನುಗುಣವಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಮ / ಬೆಸ ಸೆಮಿಸ್ಟರ್‌ತರಗತಿಗಳು ನಡೆಯಲಿವೆ.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲು ಅನುಮತಿ ನೀಡುವಂತೆ ಉಲ್ಲೇಖ(3) ರಂತೆ ಸಂಸ್ಥೆಯ ಪ್ರಾಂಶುಪಾಲರುಗಳು ಕೋರಲಾಗಿದ್ದು, ಈ ಸಂಬಂಧ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲು ಅನುಮತಿ ನೀಡುವಂತೆ ಉಲ್ಲೇಖ(4) ರಂತೆ ಏಕ ಕಡತದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಲಾಗಿತ್ತು.

ಉಲ್ಲೇಖ(5) ರ ಸರ್ಕಾರದ ಪತ್ರದಲ್ಲಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2023-24ನೇ ಸಾಲಿನ ಅಂತ್ಯದವರೆಗೆ(ಮಾರ್ಚ್-2024) ಪಡೆಯಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ.

...2/-

ಈ ಹಿನ್ನೆಲೆಯಲ್ಲಿ 2023-24ನೇ ಆರ್ಥಿಕ ವರ್ಷದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಹೊರಡಿಸುವ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಮ / ಬೆಸ ಸೆಮಿಸ್ಟರ್ ತರಗತಿಗಳ ಶೈಕ್ಷಣಿಕ ವೇಳಾಪಟ್ಟಿಯ ಅನುಗುಣವಾಗಿ ಸಂಸ್ಥೆಗಳಲ್ಲಿ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲು ಹಾಗೂ ಸಂಸ್ಥೆಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಂಡಿರುವುದಕ್ಕೆ, 2023-24ನೇ ಆರ್ಥಿಕ ವರ್ಷದಲ್ಲಿ ಬರುವ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ (ಶೈಕ್ಷಣಿಕ ಕ್ಯಾಲೆಂಡರ್ ಪ್ರಕಾರ ರಜೆಯ ಅವಧಿಯಲ್ಲಿ ಸದರಿ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಸ್ಥಗಿತಗೊಳಿಸುವುದು) ಕಾರ್ಯನಿರ್ವಹಿಸಿದ ಅವಧಿಗೆ 2023-24ನೇ ಸಾಲಿನ ಅಂತ್ಯದವರೆಗೆ(ಮಾರ್ಚ್-2024) ಮಾತ್ರ ಕೆಳಕಂಡ ಕೋಷ್ಟಕದ ಕಾಲಂ(4) ರಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯೊಳಗೆ ಉಪಲಬ್ದ ಕಾರ್ಯಭಾರ ಮಿತಿಯೊಳಗೊಳಪಟ್ಟು ಅನುಮೋದನೆ ನೀಡಿ, ಸದರಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಂಡಿರುವುದಕ್ಕೆ ಇಲಾಖೆಯ ಲೆಕ್ಕ ಶೀರ್ಷಿಕೆ 2203-00-112-0-02-324 ಅಡಿಯಲ್ಲಿ ಭತ್ಯೆಯನ್ನು ಭರಿಸಲು ಅನುಮತಿ ನೀಡಲಾಗಿದೆ.

| ಕ್ರ. ಸಂ. | ಸಂಸ್ಥೆಯ ಸಂಕೇತ | ಸಂಸ್ಥೆಯ ಹೆಸರು | ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾದ ಮತ್ತು ಅನುಮೋದನೆ ನೀಡಲಾದ ಸಂಖ್ಯೆ | |
|---|---|---|---|---|
| | | | ಸಮ ಸೆಮಿಸ್ಟರ್ | ಬೆಸ ಸೆಮಿಸ್ಟರ್ |
| (1) | (2) | (3) | (4) | |
| 1. | 200 | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 14 | 20 |
| 2. | 202 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | 11 | 12 |
| 3. | 203 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | 13 | 12 |
| 4. | 204 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | 23 | 20 |
| 5. | 205 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ | 28 | 34 |
| 6. | 206 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | 08 | 12 |
| 7. | 207 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 19 | 22 |
| 8. | 208 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | 38 | 46 |
| 9. | 209 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | 22 | 30 |
| 10. | 210 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 30 | 46 |
| 11. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | 33 | 44 |
| 12. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 36 | 65 |
| 13. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಹಳ್ಳಿ | 30 | 36 |
| 14. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಳ್ಳಕೆರೆ | 15 | 44 |
| 15. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ನರಗುಂದ | 12 | 12 |
| 16. | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ | 12 | 12 |

...3/-

ಷರತ್ತುಗಳು: 1) ಅರೆಕಾಲಿಕ ಉಪನ್ಯಾಸಕರಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಹಾಜರಾತಿ ವಹಿಯನ್ನು ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದು. ಅರೆಕಾಲಿಕ ಉಪನ್ಯಾಸಕರು ಕಾರ್ಯ ನಿರ್ವಹಿಸಿದ ಅವಧಿಗೆ ಸಂಬಂಧಿಸಿದ ಮೊತ್ತವನ್ನು ಪ್ರೋರಾಟ ಆಧಾರದ ಮೇರೆಗೆ ಅರೆಕಾಲಿಕ ಭತ್ಯೆ ನೀಡತಕ್ಕದು.

2) ಅರೆಕಾಲಿಕ ಉಪನ್ಯಾಸಕರ ನೇಮಕಾತಿಯು ತಾತ್ಕಾಲಿಕವಾಗಿರುತ್ತದೆಯೆಂದೂ, ಪೂರ್ಣಾವಧಿ ಉಪನ್ಯಾಸಕರುಗಳ ನೇಮಕಾತಿಯಾದ ಕೂಡಲೇ ಸದರಿಯವರ ನೇಮಕಾತಿಯನ್ನು ರದ್ದುಪಡಿಸಲಾಗುವುದೆಂದು ಅರೆಕಾಲಿಕ ಉಪನ್ಯಾಸಕರುಗಳಿಂದ ಮುಚ್ಚಳಿಕೆಯನ್ನು ಪಡೆಯತಕ್ಕದ್ದು.

3) ಸಂಸ್ಥೆಗಳಲ್ಲಿ ನೇಮಿಸಿಕೊಂಡಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಹಿತಿಯ ನಮೂನೆಯನ್ನು ಮಾತ್ರ ಇಲಾಖೆಗೆ ಸಲ್ಲಿಸತಕ್ಕದ್ದು ಹಾಗೂ ಸದರಿ ಅರೆಕಾಲಿಕ ಉಪನ್ಯಾಸಕರುಗಳ ದಾಖಲಾತಿಗಳನ್ನು ಸಂಸ್ಥೆಯಲ್ಲಿಯೇ ಇರಿಸಿಕೊಳ್ಳತಕ್ಕದ್ದು.

**ಸೂಚನೆ:-** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹೊಸದಾಗಿ ಆರಂಭಗೊಂಡಿರುವ ಕೆಳಕಂಡ ಸಂಸ್ಥೆಗಳಲ್ಲಿ ಪೂರ್ಣಕಾಲಿಕ ಹುದ್ದೆಗಳು ಮಂಜೂರಾಗದ ಕಾರಣ ವೇತನ ಸೆಳೆಯುವ ಮತ್ತು ಬಟವಾಡೆ ಅಧಿಕಾರ(DDO) ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಸಂಸ್ಥೆಗಳ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಠಿಯಿಂದ ಸಂಸ್ಥೆಯ ಸಮೀಪದ ಸಂಸ್ಥೆಗಳಲ್ಲಿ ಅರೆಕಾಲಿಕ ಉಪನ್ಯಾಸಕರುಗಳಿಗೆ ಗೌರವಧನ ಪಾವತಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ.

| ಕ್ರ.ಸಂ. | ಹೊಸದಾಗಿ ಆರಂಭಗೊಂಡಿರುವ ಸಂಸ್ಥೆಯ ಹೆಸರು | ವೇತನ ಬಟವಾಡೆ ಅಧಿಕಾರ ನೀಡಿರುವ ಸಂಸ್ಥೆಯ ಹೆಸರು |
|---|---|---|
| 1. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ |
| 2. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ನರಗುಂದ | |
| 4. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು |

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ).

ಪ್ರತಿ:-

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಸಹಾಯಕ ನಿರ್ದೇಶಕರು(ಯೋಜನೆ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಲೆಕ್ಕಾಧಿಕಾರಿ(ಬಿಲ್ಸ್), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
5. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
6. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.